# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2018-19ನೇ ಸಾಲಿಗೆ ರಾಜ್ಯ ವಲಯದಡಿ **C&Q (General, SCP, TSP) & MVS O&M ಘಟಕದಡಿ** ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 05-04-2018.

**<u>ಪೀಠಿಕೆ:</u>**

ಮೇಲೆ ಓದಲಾದ ಉಲ್ಲೇಖದಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2018-19ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2215-01-102-9-08 ಅಡಿ ಒಟ್ಟು ರೂ.220000.00 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು, ಸದರಿ ಅನುದಾನದಲಿ ರಾಜ್ಯದ ಪಾಲಿನ ಮೊದಲನೇ ಕಂತಿನ ಅನುದಾನ ರೂ.39303.00.00 ಲಕ್ಷಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಈಗಾಗಲೇ ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಸದರಿ **ಮೊದಲನೇ ಕಂತಿನ ಅನುದಾನ** ರೂ.39303.00 ಲಕ್ಷಗಳ ರಾಜ್ಯದ ಪಾಲಿನ ಅನುದಾನದಲ್ಲಿ ಪ್ರಸ್ತುತ ಗ್ರಾಮೀಣ ಕುಡಿಯುವ ನೀರು ಯೋಜನೆಯ C&Q (Gen, SCP & TSP)& MVS O&M ಘಟಕಗಳಡಿ ರಾಜ್ಯದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಳಿಗೆ ಕುಡಿಯುವ ನೀರಿನ ಕಾಮಗಾರಿಗಳಿಗಾಗಿ **ಒಟ್ಟು ರೂ.3507.85 ಲಕ್ಷಗಳ** ಅನುದಾನವನ್ನು ಅನುಬಂದದಲ್ಲಿರುವಂತೆ ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ. ಆದ್ದರಿಂದ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 17-05-2018</u>**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ 2018-19ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮದ (NRDWP) ಕುಡಿಯುವ ನೀರಿನ ಯೋಜನೆಗಳಿಗಾಗಿ ರಾಜ್ಯ ವಲಯದ C&Q ಘಟಕದ ಸಾಮಾನ್ಯ ಲೆಕ್ಕ ಶೀರ್ಷಿಕೆ 2215-01-102-9-08-132 ಅಡಿ ರೂ.1400.00 ಲಕ್ಷಗಳು, ಎಸ್.ಸಿ.ಪಿ. ಲೆಕ್ಕ ಶೀರ್ಷಿಕೆ 2215-01-102-9-08-422 ಅಡಿ ರೂ.794.48 ಲಕ್ಷಗಳು ಹಾಗೂ ಟಿ.ಎಸ್.ಪಿ. ಲೆಕ್ಕ ಶೀರ್ಷಿಕೆ 2215-01-102-9-08-423 ಅಡಿ ರೂ.413.37 ಲಕ್ಷಗಳು ಒಟ್ಟು ರೂ.2607.85 ಲಕ್ಷಗಳು (ಎರಡು ಸಾವಿರದ ಆರುನೂರ ಏಳು ಲಕ್ಷಗಳ ಎಂಬತ್ತೈದು ಸಾವಿರಗಳು ಮಾತ್ರ) ಹಾಗೂ MVS (O&M) ಘಟಕದ ಸಾಮಾನ್ಯ ಲೆಕ್ಕ ಶೀರ್ಷಿಕೆ 2215-01-102-9-08-132 ಅಡಿ ರೂ.900.00 ಲಕ್ಷ (ಒಂಬತ್ತು ನೂರು ಲಕ್ಷಗಳು ಮಾತ್ರ) **ಒಟ್ಟಾರೆ ರೂ.3507.85** ಲಕ್ಷಗಳ (ಮೂರು ಸಾವಿರದ ಐದು ನೂರ ಏಳು ಲಕ್ಷಗಳ ಎಂಬತ್ತೈದು ಸಾವಿರಗಳು ಮಾತ್ರ) ಅನುದಾನವನ್ನು ಅನುಬಂಧದಲ್ಲಿ ತೋರಿಸಿರುವಂತೆ ರಾಜ್ಯದ 22 ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ General ಅಡಿ ಬಿಡುಗಡೆಯಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-132 ಅಡಿ, SCP ಅಡಿ ಬಿಡುಗಡೆಯಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-422 ಹಾಗೂ TSP ಅಡಿ ಬಿಡುಗಡೆಯಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-423 ಅಡಿ ವೆಚ್ಚ ಭರಿಸತಕ್ಕದ್ದು.

3. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು RTGS ಮುಖೇನ ಈಗಾಗಲೇ ಗೊತ್ತುಪಡಿಸಿರುವ SWSM ಬ್ಯಾಂಕ್ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಮುಖಾಂತರ ವಿನಿಯೋಗಿಸತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ-1999 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ನಿಯಮಗಳು / ಕಾಯ್ದೆಗಳನ್ವಯ ಖರ್ಚು ಭರಿಸತಕ್ಕದ್ದು.

5. ರಾಜ್ಯ ಮಟ್ಟದಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ SWSM ನ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಯಿಂದ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ

ಲೆಕ್ಕಾಧಿಕಾರಿಗಳ ಮೇಲುರುಜುವಿನೊಂದಿಗೆ ಆಯಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ ಸಾಮಾನ್ಯ, ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಅಡಿ ಕಳುಹಿಸುವ ಬಿಲ್ಲುಗಳನ್ನು ಈ ಆದೇಶದಲ್ಲಿ ಸಂಬಂಧಿಸಿದ ಜಿಲ್ಲಾವಾರು / ವಿಭಾಗವಾರು ಬಿಡುಗಡೆ ಮಾಡಿರುವ ಅನುದಾನದ ಮಿತಿಯೊಳಗೆ ಮಾನ್ಯ ಮಾಡಲು ಸಿಂಡಿಕೇಟ್ ಬ್ಯಾಂಕ್ – ರಾಜ್ಯ ಮಟ್ಟದಲ್ಲಿ ಕ್ರಮವಹಿಸತಕ್ಕದ್ದು. ಹಾಗೂ ಇಲಾಖಾ ಪಂಚತಂತ್ರದ ತಂತ್ರಾಂಶದಲ್ಲಿ (ಗಾಂಧಿ ಸಾಕ್ಷಿ ಕಾಯಕಲ್ಪ) ಹಾಗೂ IMIS ನಲ್ಲಿ ವೆಚ್ಚ ದಾಖಲಿಸಬೇಕು. ಇದನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ಪರಿವೀಕ್ಷಿಸಿ ದೃಢೀಕರಿಸಬೇಕು.

6. ಬ್ಯಾಂಕ್‌ಗೆ ಕಳುಹಿಸುವ ಆರ್.ಟಿ.ಜಿ.ಎಸ್. ನಮೂನೆಯಲ್ಲಿ **ಸಂಬಂಧಿಸಿದ ಘಟಕಗಳ ಹೆಸರನ್ನು** ನಮೂದಿಸತಕ್ಕದ್ದು ಹಾಗೂ ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಈಗಾಗಲೇ ಅನುಮೋದನೆಯಾಗಿ ಕ್ರಿಯಾ ಯೋಜನೆಯಡಿ ಸೇರ್ಪಡಿಸಲ್ಪಟ್ಟಿರುವ ಮುಂದುವರಿದಿರುವ / ಪೂರ್ಣಗೊಂಡಿರುವ / ಪೂರ್ಣಗೊಳಿಸ ಬೇಕಾಗಿರುವ ಕುಡಿಯುವ ನೀರಿನ ಯೋಜನೆಗಳಿಗೆ ಮಾತ್ರ ವಿನಿಯೋಗಿಸತಕ್ಕದ್ದು.

7. ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆದುರಾಗಿ ಸಂಬಂಧಪಟ್ಟ ಕಾಮಗಾರಿಗಳ ಅನುಷ್ಠಾನದ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMIS ನಲ್ಲಿ ಪ್ರತಿ ಮಾಹೆ 10ನೇ ದಿನಾಂಕದೊಳಗೆ ಇಂದೀಕರಿಸತಕ್ಕದ್ದು. ಹಾಗೂ ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ ಇವರು ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು IMIS ನಲ್ಲಿ ಇಂದೀಕರೀಸಿದ ಮಾಹಿತಿಯನ್ನು ಪರಿಶೀಲಿಸತಕ್ಕದ್ದು.

8. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ.&.ನೈ. ಇಲಾಖೆ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು IMIS ನಲ್ಲಿ ಇಂದೀಕರಿಸತಕ್ಕದ್ದು.

9. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮ ವಹಿಸತಕ್ಕದ್ದು. ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡಿ ವರದಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾ. ಕು. ನೀ. &. ನೈ. ಇಲಾಖೆ, ಬೆಂಗಳೂರು.

**ಪ್ರತಿಯನ್ನು :**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು.
6. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ರಾಜ್ಯದ 30 ಜಿಲ್ಲೆಗಳು
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಜ್ಯದ 30 ಜಿಲ್ಲೆಗಳು ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.
8. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ, 4 ವೃತ್ತ ಕಛೇರಿಗಳು
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
13. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
14. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
16. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಜ್ಯದ 30 ಜಿಲ್ಲೆಗಳು ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.

17. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, ರಾಜ್ಯದ 31 ವಿಭಾಗ ಕಛೇರಿಗಳು ಇವರಿಗೆ ಕಳುಹಿಸುತ್ತಾ, ಆದೇಶದಲ್ಲಿನ ನಿಬಂಧನೆಗಳನ್ನು ಚಾಚೂ ತಪ್ಪದೆ ಪಾಲಿಸಲು ಸೂಚಿಸಿದೆ.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾ. ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
20. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಶಾಖೆ, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
21. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

## ಅನುಬಂಧ

ಸರ್ಕಾರದ ಆದೇಶ ಸಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 18-05-2018 ರ ಲಗತ್ತು

2018-19ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯ ರಾಜ್ಯ ವಲಯದಡಿ ಸಿ.&.ಕ್ಯೂ. - ಎಸ್.ಸಿ.ಪಿ., ಟಿ.ಎಸ್.ಪಿ , ಸಾಮಾನ್ಯ & ಎಂ.ವಿ.ಎಸ್ ಒ&ಎಂ ಘಟಕದಡಿ ಬಿಡುಗಡೆ ಮಾಡಲಾದ ಅನುದಾನ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ಬಿಡುಗಡೆ ಮಾಡಲಾದ ಅನುದಾನ. | | | | | |
|---|---|---|---|---|---|---|---|
| | | C&Q-SCP | C&Q-TSP | C&Q-Gen | Total | MVS-O&M | Grand Total |
| 1 | ಬೆಂಗಳೂರು(ಗ್ರಾ) | 10.50 | 8.50 | 170.00 | 189.00 | 0.00 | 189.00 |
| 2 | ಬೆಂಗಳೂರು(ನ) | 40.00 | 20.00 | 0.00 | 60.00 | 0.00 | 60.00 |
| 3 | ಬೆಳಗಾಂ | 30.00 | 0.00 | 100.00 | 130.00 | 0.00 | 130.00 |
| 4 | ಚಿಕ್ಕೋಡಿ | 70.00 | 0.00 | 100.00 | 170.00 | 200.00 | 370.00 |
| 5 | ಬಳ್ಳಾರಿ | 100.00 | 100.00 | 100.00 | 300.00 | 100.00 | 400.00 |
| 6 | ಬಿಜಾಪುರ | 0.00 | 0.00 | 0.00 | 0.00 | 200.00 | 200.00 |
| 7 | ಚಾಮರಾಜನಗರ | 85.00 | 25.00 | 50.00 | 160.00 | 0.00 | 160.00 |
| 8 | ಚಿಕ್ಕಬಳ್ಳಾಪುರ | 25.00 | 25.00 | 50.00 | 100.00 | 0.00 | 100.00 |
| 9 | ಚಿತ್ರದುರ್ಗ | 20.00 | 20.00 | 0.00 | 40.00 | 0.00 | 40.00 |
| 10 | ದಕ್ಷಿಣಕನ್ನಡ | 0.00 | 0.00 | 50.00 | 50.00 | 0.00 | 50.00 |
| 11 | ದಾವಣಗೆರೆ | 30.00 | 0.00 | 0.00 | 30.00 | 100.00 | 130.00 |
| 12 | ಗುಲ್ಬರ್ಗಾ | 30.00 | 0.00 | 70.00 | 100.00 | 0.00 | 100.00 |
| 13 | ಹಾಸನ | 15.50 | 0.00 | 50.00 | 65.50 | 0.00 | 65.50 |
| 14 | ಹಾವೇರಿ | 80.00 | 65.00 | 0.00 | 145.00 | 100.00 | 245.00 |
| 15 | ಕೋಲಾರ | 20.00 | 14.00 | 0.00 | 34.00 | 0.00 | 34.00 |
| 16 | ಕೊಪ್ಪಳ | 100.00 | 100.00 | 200.00 | 400.00 | 0.00 | 400.00 |
| 17 | ಮಂಡ್ಯ | 0.00 | 0.00 | 100.00 | 100.00 | 100.00 | 200.00 |
| 18 | ರಾಮನಗರ | 1.98 | 15.87 | 50.00 | 67.85 | 50.00 | 117.85 |
| 19 | ಶಿವಮೊಗ್ಗ | 16.50 | 0.00 | 130.00 | 146.50 | 0.00 | 146.50 |
| 20 | ತುಮಕೂರು | 100.00 | 0.00 | 180.00 | 280.00 | 0.00 | 280.00 |
| 21 | ಉಡುಪಿ | 20.00 | 20.00 | 0.00 | 40.00 | 0.00 | 40.00 |
| 22 | ಉತ್ತರ ಕನ್ನಡ | 0.00 | 0.00 | 0.00 | 0.00 | 50.00 | 50.00 |
| | ಒಟ್ಟು | **794.48** | **413.37** | **1400.00** | **2607.85** | **900.00** | **3507.85** |

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾ. ಕು. ನೀ. &. ನೈ. ಇಲಾಖೆ, ಬೆಂಗಳೂರು.